ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೊಂದನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 24ನೇ ಡಿಸೆಂಬರ್, 2021

(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ)	ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಹತ್ತನೇ ಪಟ್ಟಿ
ಆ)	**ವರ್ಗಾವಣೆಗೊಂಡ ಪ್ರಶ್ನೆ:-**		
	ದಿನಾಂಕ: 20.12.2021ರ 6ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 79(789)	:	ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು
ಇ)	ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಹತ್ತನೇ ಪಟ್ಟಿ

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಎಂ.ಬಿ. ಪಾಟೀಲ್, ಕೃಷ್ಣ ಬೈರೇಗೌಡ, ಈಶ್ವರ್ ಖಂಡ್ರೆ, ಮಹಾಂತೇಶ್ ಕೌಜಲಗಿ ಹಾಗೂ ಇತರರು** – ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿರುವ ಕೃಷ್ಣಾ ಮೇಲ್ದಂಡೆ, ಮಹಾದಾಯಿ ತಿರುವು, ಕಾರಂಜಾ ಯೋಜನೆ ಮತ್ತು ಸಿಂಗಟಾಲೂರು ಏತ ನೀರಾವರಿ ಯೋಜನೆಗಳನ್ನು ಆದ್ಯತೆಯ ಮೇಲೆ ಅನುಷ್ಠಾನಗೊಳಿಸುವ ಬಗ್ಗೆ

ಹಾಗೂ

ಶ್ರೀಯುತರುಗಳಾದ ಎ.ಎಸ್. ಪಾಟೀಲ್ (ನಡಹಳ್ಳಿ), ಪಿ. ರಾಜೀವ್, ದೊಡ್ಡಗೌಡರ ಮಹಾಂತೇಶ್ ಬಸವಂತರಾಯ್, ಸಿದ್ದು ಸವದಿ, ಮಹದೇವಪ್ಪ ಶಿವಲಿಂಗಪ್ಪ ಯಾದವಾಡ ಹಾಗೂ ಇತರರು – ಕರ್ನಾಟಕ ಏಕೀಕರಣದ ನಂತರ ಕರ್ನಾಟಕ/ಉತ್ತರ ಕರ್ನಾಟಕ ಭಾಗದಲ್ಲಿ ಅಭಿವೃದ್ಧಿಯ ವ್ಯತ್ಯಾಸ/ ತಾರತಮ್ಯ ಆಗಿರುವ ಬಗ್ಗೆ ಹಾಗೂ ಅದಕ್ಕೆ ಪರಿಹಾರವನ್ನು ಕಂಡುಹಿಡಿಯುವ ಅಗತ್ಯತೆ ಕುರಿತಂತೆ

ಹಾಗೂ

ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಬಂಡೆಪ್ಪ ಖಾಶೆಂಪೂರ, ಡಿ.ಸಿ. ತಮ್ಮಣ್ಣ, ಹೆಚ್.ಕೆ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ ಹಾಗೂ ಇತರರು – ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿರುವ ಕೃಷ್ಣಾ ಮೇಲ್ದಂಡೆ, ಮಹಾದಾಯಿ ಹಾಗೂ ಮೇಕೆದಾಟು ಯೋಜನೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಗಳ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

... 2/ ..

2) **ಶ್ರೀಯುತರುಗಳಾದ ಎ.ಟಿ. ರಾಮಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ಕೆ. ಶ್ರೀನಿವಾಸಗೌಡ, ಕೆ.ಎಸ್. ಲಿಂಗೇಶ್, ಡಾ. ಕೆ. ಅನ್ನದಾನಿ ಹಾಗೂ ಇತರರು** – ಕರ್ನಾಟಕ ರಾಜ್ಯದಲ್ಲಿ ಲಕ್ಷಾಂತರ ಕೋಟಿ ರೂಪಾಯಿಗಳ ಸರ್ಕಾರದ ಸಂಪತ್ತನ್ನು ಲೂಟಿ ಮಾಡುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಕೆ.ಆರ್. ರಮೇಶ್ ಕುಮಾರ್, ಹೆಚ್.ಕೆ. ಪಾಟೀಲ್, ಡಾ. ಜಿ. ಪರಮೇಶ್ವರ್, ಕೃಷ್ಣ ಬೈರೇಗೌಡ ಡಾ. ಅಜಯ್ ಧರ್ಮಸಿಂಗ್ ಹಾಗೂ ಇತರರು** – ಕೋವೀಡ್ ಸಂದರ್ಭದಲ್ಲಿ ರಾಜ್ಯದಲ್ಲಿ ಜಾರಿಗೆ ತಂದಿರುವ ಎ.ಪಿ.ಎಂ.ಸಿ. ಕಾಯ್ದೆ, ಭೂ ಸುಧಾರಣಾ ಕಾಯ್ದೆ ಮತ್ತು ಜಾನುವಾರು ಹತ್ಯಾ ನಿಷೇಧ ಕಾಯ್ದೆಗಳನ್ನು ಹಿಂಪಡೆಯಬೇಕೆಂದು ರೈತರು ಪ್ರತಿಭಟಿಸುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3. ಗಮನ ಸೆಳೆಯುವ ಸೂಚನೆಗಳು

1) **ಡಾ. ಕೆ. ಶ್ರೀನಿವಾಸಮೂರ್ತಿ ಅವರು** – ನೆಲಮಂಗಲ ವಿಧಾನಸಭಾ ಕ್ಷೇತ್ರದ ದಾಬಸ್‌ಪೇಟೆ ಠಾಣೆ ವ್ಯಾಪ್ತಿಯಲ್ಲಿ ನಡೆದ ಅಪಘಾತವನ್ನು ಸರಿಯಾಗಿ ವಿಚಾರಣೆ ಮಾಡದೆ ಕಾರು ಚಾಲಕ ಮತ್ತು ಮಾಲೀಕರ ವಿರುದ್ಧ ಅಲ್ಲಿನ ಸಬ್ ಇನ್ಸ್‌ಪೆಕ್ಟರ್‌ರವರು ಸುಳ್ಳು ದೂರು ದಾಖಲಿಸಿ ಜೈಲಿಗೆ ಕಳುಹಿಸಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

2) **ಶ್ರೀ ಶ್ರೀನಿವಾಸ ಮಾನೆ ಅವರು** – ಕೋವಿಡ್-19ರ ನಿರ್ವಹಣೆಗಾಗಿ ಏಪ್ರಿಲ್ 2020 ರಿಂದ ಡಿಸೆಂಬರ್ 2020 ರವರೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಯ ಅಡಿಯಲ್ಲಿ ಕರ್ತವ್ಯ ನಿರ್ವಹಿಸಿದ ನೌಕರರು ಹಾಗೂ ಎನ್.ಪಿ.ಎಸ್. ಅಡಿಯಲ್ಲಿ ನಿವೃತ್ತ ನೌಕರರಿಗೆ ಪಿಂಚಣಿ ಇತ್ಯಾದಿಗಳನ್ನು ಪಾವತಿ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

3) **ಶ್ರೀ ಯು.ಟಿ. ಖಾದರ್ ಅವರು** – ರಾಜ್ಯದಲ್ಲಿ ಸಾಂಸ್ಕೃತಿಕವಾಗಿ ಹಾಗೂ ಸಾಮಾಜಿಕವಾಗಿ ಮಹತ್ವ ಹೊಂದಿರುವ ಈಡಿಗ ಮತ್ತು ಬ್ಯಾರಿ ಸಮುದಾಯಗಳ ಏಳಿಗೆಯ ದೃಷ್ಟಿಯಿಂದ ಅಭಿವೃದ್ಧಿ ನಿಗಮಗಳನ್ನು ಸ್ಥಾಪಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4) **ಶ್ರೀ ಎಂ.ಎಸ್. ಸೋಮಲಿಂಗಪ್ಪ ಅವರು** – ವಿವಿಧ ಹುದ್ದೆಗಳ ನೇಮಕಾತಿಗಳಲ್ಲಿ ಪರಿಶಿಷ್ಟ ಜಾತಿ/ಪಂಗಡದ ಅಭ್ಯರ್ಥಿಗಳಿಗೆ ಹಾಗೂ ವಿಧವೆಯರಿಗೆ ನೀಡಿರುವ ವಯೋಮಿತಿ ಸಡಿಲಿಕೆಯ ಅವಕಾಶವನ್ನು ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯವರ ನೇಮಕಾತಿಗೂ ವಿಸ್ತರಿಸುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

5) **ಶ್ರೀಮತಿ ರೂಪಕಲಾ ಎಂ. ಅವರು** – ಭಾರಿ ಮಳೆಯಿಂದಾಗಿ ಕೆ.ಜಿ.ಎಫ್. ತಾಲ್ಲೂಕಿನ ಕೊಳಚೆ ಪ್ರದೇಶದಲ್ಲಿನ ಮನೆಗಳಿಗೆ ಹಾನಿಯಾಗಿದ್ದು ಅಲ್ಲಿ ವಾಸಿಸುತ್ತಿರುವ ಜನರಿಗೆ ತೊಂದರೆ ಉಂಟಾಗಿರುವುದರಿಂದ ಪುನರ್ ವಸತಿಯನ್ನು ಒದಗಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

... 3/ ..

6) **ಶ್ರೀ ದಿನಕರ ಕೇಶವ ಶೆಟ್ಟಿ ಅವರು** – ಉತ್ತರ ಕನ್ನಡ ಜಿಲ್ಲೆಯ ಕುಮಟಾ ಹಾಗೂ ಹೊನ್ನಾವರ ಸರ್ಕಾರಿ ಆಸ್ಪತ್ರೆಗಳಲ್ಲಿ ಬಿ.ಆರ್. ಶೆಟ್ಟಿ ಸಂಸ್ಥೆಯವರು ನಿರ್ವಹಿಸುತ್ತಿದ್ದ ಡಯಾಲಿಸಿಸ್ ಕೇಂದ್ರದ ನಿರ್ವಹಣೆಯನ್ನು ನಿಲ್ಲಿಸಿರುವುದರಿಂದ ಮೂತ್ರಪಿಂಡ ವೈಫಲ್ಯದಿಂದ ಬಳಲುತ್ತಿರುವ ರೋಗಿಗಳಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

7) **ಶ್ರೀ ಸುರೇಶ್‌ಗೌಡ ಅವರು** – ನಾಗಮಂಗಲ ಪುರಸಭೆ ವ್ಯಾಪ್ತಿಯ ಸುಭಾಷನಗರದಲ್ಲಿ ಕೊಳಚೆ ನಿರ್ಮೂಲನ ಮಂಡಳಿಯಿಂದ ನಿರ್ಮಿಸಲಾಗಿರುವ ವಸತಿ ಗೃಹಗಳಿಗೆ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡುವ ಬಗ್ಗೆ ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಅಭಯ್ ಪಾಟೀಲ್ ಅವರು** – ರಾಜ್ಯದ ಬಹಳಷ್ಟು ನಗರಪ್ರದೇಶಗಳಲ್ಲಿ ಬಡ ಕೂಲಿ ಕಾರ್ಮಿಕರು, ನೇಕಾರರು ಹಾಗೂ ಇತರರು ಸ್ಥಳೀಯ ಭೂಮಾಲೀಕರಿಂದ ಬಿನ್ ಶೇತ್ಕಿ ಆಗಿರುವ ಹಾಗೂ ಬಿನ್ ಶೇತ್ಕಿ ಆಗಿರದ ಕೃಷಿ ಜಮೀನುಗಳಲ್ಲಿ ಮನೆಗಳನ್ನು ನಿರ್ಮಿಸಿಕೊಂಡು ವಾಸವಾಗಿದ್ದು ಅವರುಗಳು ತಾಂತ್ರಿಕ ಮತ್ತು ಆಡಳಿತಾತ್ಮಕವಾಗಿ ತೊಂದರೆಗೆ ಒಳಗಾಗಿರುವುದರಿಂದ ಅವುಗಳನ್ನು ಸಕ್ರಮಗೊಳಿಸಿ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9) **ಶ್ರೀ ಸಿದ್ದರಾಮಯ್ಯ ಅವರು** – ಪರಿಶಿಷ್ಟ ಪಂಗಡಕ್ಕೆ ಸೇರಿದ 12 ಬುಡಕಟ್ಟು ಜಾತಿಗಳಿಗೆ ಸಿಂಧುತ್ವ ಪ್ರಮಾಣಪತ್ರವನ್ನು ನೀಡಲು ನಾಗರೀಕ ಹಕ್ಕು ನಿರ್ದೇಶನಾಲಯದ ಅಧಿಕಾರಿಗಳು ಕಿರುಕುಳ ನೀಡುತ್ತಿರುವುದರಿಂದ ಅಭ್ಯರ್ಥಿಗಳು ನೌಕರಿಗೆ ಸೇರಲು ಸಮಸ್ಯೆ ಉಂಟಾಗಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

10) **ಶ್ರೀ ಆರ್.ವಿ. ದೇಶಪಾಂಡೆ ಅವರು** – ಉತ್ತರ ಕನ್ನಡ ಜಿಲ್ಲೆಯ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು/ಪರಿಶಿಷ್ಟ ಪಂಗಡ/ಪರಿಶಿಷ್ಟ ಜಾತಿ ಹಾಗೂ ಇತರೆ ಪಾರಂಪರಿಕ ಅರಣ್ಯ ವಾಸಿಗಳು ಅರಣ್ಯ ಹಕ್ಕುಗಳಿಗಾಗಿ ಸಲ್ಲಿಸಿರುವ ಅರ್ಜಿಗಳು ತಿರಸ್ಕೃತವಾಗಿರುವುದರಿಂದ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

11) **ಡಾ: ಅಜಯ್ ಧರ್ಮಸಿಂಗ್ ಅವರು** – ರಾಜ್ಯದಲ್ಲಿ ನಾಯ್ಕಡ, ನಾಯಕ, ಪರ್ಯಾಯ ಪದಗಳಾದ ತಳವಾರ ಮತ್ತು ಪರಿವಾರ ಸಮಾಜದವರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವುದರ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

12) **ಶ್ರೀ ಕೆ.ಎಸ್. ಲಿಂಗೇಶ್ ಅವರು** – ಬೇಲೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಅತಿವೃಷ್ಟಿಯಿಂದ ಶಿಥಿಲವಾಗಿರುವ ಶಾಲಾ ಕೊಠಡಿಗಳನ್ನು ನಿರ್ಮಾಣ ಮಾಡುವ ಬಗ್ಗೆ ಹಾಗೂ ಬೋಧಕ ಸಿಬ್ಬಂದಿಯನ್ನು ನೇಮಕ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

... 4/ ..

4. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ರವೀಂದ್ರ ಶ್ರೀಕಂಠಯ್ಯ ಇವರು – ಶ್ರೀರಂಗಪಟ್ಟಣ ಕ್ಷೇತ್ರ ವ್ಯಾಪ್ತಿಯಲ್ಲಿ ಜಮೀನುಗಳ ಸರ್ವೇ, ಪೋಡಿ, ನಕಾಶೆಗಳು ದೊರಕದೇ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ದಿನಾಂಕ:13.12.2021ರ ಗಮನ ಸೆಳೆಯುವ ಸೂಚನೆಗೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm